ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (475)333
ಸದಸ್ಯರ ಹೆಸರು : ಶ್ರೀ ಸಿದ್ದುಸವದಿ (ತೇರದಾಳ್)
ಉತ್ತರಿಸುವ ಸಚಿವರು : (ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಅ) ತೇರದಾಳ್ ಮತಕ್ಷೇತ್ರದಲ್ಲಿ ಪದವಿ ಪೂರ್ವ ಕಾಲೇಜುಗಳು ಮತ್ತು ಪ್ರೌಢಶಾಲೆಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಬಂದಿದೆ

ಆ) ಈ ಕ್ಷೇತ್ರದ ಎರಡೂ ಶಾಲೆಗಳಲ್ಲಿ ಸಾಮರ್ಥ್ಯಕ್ಕಿಂತ ಹೆಚ್ಚಿನ ಮಕ್ಕಳನ್ನು ಸೇರಿಸಿಕೊಳ್ಳುವುದರಿಂದ ಕಲಿಕೆಯ ಗುಣಮಟ್ಟವು ಕುಸಿಯುತ್ತಿರುವುದಲ್ಲದೇ, ಅಲ್ಲಿಯ ಮಕ್ಕಳು ಶಾಲೆಗಳ ಕಿಟಕಿ ಮತ್ತು ಬಾಗಿಲುಗಳ ಹೊರಗೆ ನಿಂತು ಕಲಿಯಬೇಕಾದ ಸ್ಥಿತಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ;

ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜು, ರಬಕವಿ–ಬನಹಟ್ಟಿ, ಸರ್ಕಾರಿ ಪ್ರೌಢಶಾಲೆ ರಬಕವಿ, ಜಮಖಂಡಿ ತಾಲ್ಲುಕು ಈ ಸ್ಥಳಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಾಗಿದ್ದ ಕಾರಣ 2007–08ನೇ ಸಾಲಿನಲ್ಲಿ ಮತ್ತೊಂದು ಹೊಸ ಪ್ರೌಢಶಾಲೆಯನ್ನು ರಬಕವಿ ಬನಹಟ್ಟಿಯಲ್ಲಿ ಹೆಚ್ಚುವರಿ ತರಗತಿಗಳನ್ನು ಪ್ರಾರಂಭಿಸಲು ಅನುಮತಿ ನೀಡಲಾಗಿದೆ. ಹಾಗಾಗಿ ವಿದ್ಯಾರ್ಥಿಗಳ ಕಲಿಕೆಗೆ ಯಾವುದೇ ಸಮಸ್ಯೆ ಇರುವುದಿಲ್ಲ.

ಹೌದು

ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡುವಾಗ ಈ ಕೆಳಕಂಡ ಪ್ರಮುಖ ಅಂಶಗಳನ್ನು ಪರಿಗಣಿಸಲಾಗುವುದು.

1) ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಮಂಜೂರು ಮಾಡಲು ಉದ್ದೇಶಿಸಿರುವ ಸ್ಥಳದಲ್ಲಿನ ಜನಸಂಖ್ಯೆ ಮತ್ತು ಶೈಕ್ಷಣಿಕ ಅಗತ್ಯತೆಗೆ ಆಧ್ಯತೆ ನೀಡಲಾಗುವುದು.
2) ಸಮೀಪದಲ್ಲಿರುವ ಹಾಗೂ ಸುತ್ತಮುತ್ತಲಿನ ಪ್ರೌಢಶಾಲೆಗಳಿಂದ ಕಾಲೇಜಿಗೆ ದಾಖಲಾತಿಯಾಗುವ ಸಂಭವನೀಯ ವಿದ್ಯಾರ್ಥಿಗಳ ಸಂಖ್ಯೆ.
3) ಲಭ್ಯವಿರುವ ಅಗತ್ಯ ಮೂಲಭೂತ ಸೌಲಭ್ಯಗಳು.
4) ಸದರಿ ಸ್ಥಳದಲ್ಲಿ ಸರ್ಕಾರಿ ಪ್ರೌಢಶಾಲೆಯಿದ್ದರೆ ಅದನ್ನು ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜಾಗಿ ಮೇಲ್ದರ್ಜೆಗೇರಿಸಲು ಅಥವಾ ಸರ್ಕಾರಿ

ಪ್ರೌಢಶಾಲೆಯಿಲ್ಲದಿದ್ದಲ್ಲಿ ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಕಾಲೇಜುಗಳ ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗುವುದು.

5) ಸಮೀಪದಲ್ಲಿರುವ ಅನುದಾನಿತ ಪದವಿ ಪೂರ್ವ ಕಾಲೇಜುಗಳ ಮತ್ತು ಅಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ.

6) ಡಾ: ನಂಜುಂಡಪ್ಪ ವರದಿಯ ಆಧಾರದ ಮೇಲೆ ಶೈಕ್ಷಣಿಕ ಬೇಡಿಕೆ, ಅವಶ್ಯಕತೆ ಹಿಂದುಳಿದ ಪ್ರದೇಶಗಳಿಗೆ ಮತ್ತು ಅಗತ್ಯವಾದ ಸ್ಥಳಗಳಿಗೆ ಆದ್ಯತೆ ನೀಡುವುದು.

7) ಹೊಸದಾಗಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಮಂಜೂರಾತಿ ಕೋರಿ ಪ್ರಸ್ತಾವನೆಗಳು ಜಿಲ್ಲಾ ಉಪ ನಿರ್ದೇಶಕರ ಮುಖಾಂತರ ಬಂದಲ್ಲಿ ವಾರ್ಷಿಕ ಅನುದಾನದ ಹಣಕಾಸಿನ ಲಭ್ಯತೆ, ಶೈಕ್ಷಣಿಕ ಅಗತ್ಯತೆ ಇದ್ದಲ್ಲಿ ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡಲು ಕ್ರಮವಹಿಸಲಾಗುವುದು.

ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಲು ನಿಗದಿಪಡಿಸಿರುವ ಮಾನದಂಡಗಳು ಈ ಕೆಳಕಂಡಂತಿವೆ.

1) 5 ಕಿ.ಮೀ. ಅಂತರದಲ್ಲಿ ಯಾವುದೇ ಪ್ರೌಢಶಾಲೆ ಇರಬಾರದು.

2) ಆಯವ್ಯಯದಲ್ಲಿನ ಹಣಕಾಸು ಲಭ್ಯತೆ ಮತ್ತು ಶೈಕ್ಷಣಿಕ ಅಗತ್ಯತೆಯನ್ನು ಅವಲಂಭಿಸಿ ಹೊಸ ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗುವುದು.

3) ಕನಿಷ್ಟ 3 ಹಿರಿಯ ಪ್ರಾಥಮಿಕ ಶಾಲೆಗಳಿಂದ ಕನಿಷ್ಟ 50 ವಿದ್ಯಾರ್ಥಿಗಳು 7ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರಬೇಕು. (ಗುಡ್ಡಗಾಡು ಮತ್ತು ಮಲೆನಾಡು ಪ್ರದೇಶದಲ್ಲಿ ಕನಿಷ್ಟ 25 ಮಕ್ಕಳು)

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (476)334
ಸದಸ್ಯರ ಹೆಸರು : ಶ್ರೀ ಸಿದ್ದುಸವದಿ (ತೇರದಾಳ್)
ಉತ್ತರಿಸುವ ಸಚಿವರು : (ಶ್ರೀ ಕೃಷ್ಣಯ್ಯ ಶೆಟ್ಟಿ)
: ಮಾನ್ಯ ವಸತಿ ಹಾಗೂ ಮುಜರಾಯಿ ಸಚಿವರು

ಅ) ಜಮಖಂಡಿ ತಾಲ್ಲೂಕಿನ ತೇರದಾಳ ಆಶ್ರಯ ಯೋಜನೆಯಲ್ಲಿ 2002–03ರ ಸಾಲಿನಲ್ಲಿ 450 ಮನೆಗಳು ಮಂಜೂರು ಆಗಿ ಕಟ್ಟಡಗಳನ್ನು ಪ್ರಾರಂಭಿಸಿ 6 ವರ್ಷಗಳಾಗಿದ್ದರೂ ಇನ್ನೂ ಪೂರ್ಣಗೊಳಿಸದಿರಲು ಕಾರಣಗಳೇನು;